## ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 05 (ಇ) ಸೇನಿಸೇ 2019

ಕರ್ನಾಟಕ ಸರ್ಕಾರ ಸಚಿವಾಲಯ,
ಆರ್ಥಿಕ ಇಲಾಖೆ, ವಿಧಾನಸೌಧ,
ಬೆಂಗಳೂರು, ದಿನಾಂಕ:25/11/2019.

## ಸುತ್ತೋಲೆ

**ವಿಷಯ: ಪ್ರಭಾರ ಭತ್ಯೆಯ ಪರಿಷ್ಕೃತ ದರಗಳು ಜಾರಿಗೊಳ್ಳುವ ದಿನಾಂಕದ ನಿರ್ಧರಣೆ ಕುರಿತಂತೆ ಸ್ಪಷ್ಟೀಕರಣ.**

**ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಆಇ 8 ಎಸ್‌ಆರ್‌ಎಸ್ 2018, ದಿನಾಂಕ: 30/04/2019.**

*****

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 32 ಮತ್ತು 68 ರಡಿಯಲ್ಲಿ ಸರ್ಕಾರಿ ನೌಕರರನ್ನು ಸ್ವತಂತ್ರ ಪ್ರಭಾರದಲ್ಲಾಗಲೀ ಅಥವಾ ತಮ್ಮ ಹುದ್ದೆಯ ಕರ್ತವ್ಯದ ಜೊತೆ ಬೇರೊಂದು ಹುದ್ದೆಯ ಹೆಚ್ಚಿನ ಪ್ರಭಾರದಲ್ಲಿರಿಸಿದಾಗ ಆ ಹುದ್ದೆಯ ವೇತನ ಶ್ರೇಣಿಯ ಕನಿಷ್ಟ ಹಂತದಲ್ಲಿ ಮೊದಲ ಮೂರು ತಿಂಗಳವರೆಗೆ ಶೇಕಡಾ 7.5 ದರದಲ್ಲಿ, ಆ ನಂತರದ ಮೂರು ತಿಂಗಳಿಗಿಂತ ಹೆಚ್ಚಿನ ಅವಧಿಗೆ ಶೇಕಡಾ 15 ರ ದರದಲ್ಲಿ ಪ್ರಭಾರ ಭತ್ಯೆಯ ದರವನ್ನು ನಿಗಧಿಪಡಿಸಿ ಉಲ್ಲೇಖಿತ ಸರ್ಕಾರದ ಆದೇಶವನ್ನು ಹೊರಡಿಸಲಾಗಿದೆ ಮತ್ತು ಸದರಿ ದರವು ಈ ಆದೇಶವನ್ನು ಹೊರಡಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದಾಗಿ ಆದೇಶಿಸಲಾಗಿದೆ.

ದಿ:30/04/2019ರ ಉಲ್ಲೇಖಿತ ಸರ್ಕಾರದ ಆದೇಶದಂತೆ ಮೂರು ತಿಂಗಳಿಗಿಂತ ಹೆಚ್ಚಿನ ಅವಧಿಗೆ ನಿಗಧಿಪಡಿಸಿರುವ ಪ್ರಭಾರ ಭತ್ಯೆಯ ದರಗಳು ಜಾರಿಗೊಳ್ಳುವ ದಿನಾಂಕದ ಕುರಿತು ಆಡಳಿತ ಇಲಾಖೆಗಳು ಸ್ಪಷ್ಟೀಕರಣ ಕೋರುತ್ತಿದ್ದು, ಈ ಕೆಳಕಂಡಂತೆ ಸ್ಪಷ್ಟೀಕರಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಆಇ 8 ಎಸ್‌ಆರ್‌ಎಸ್ 2018, ದಿನಾಂಕ: 30/04/2019ರ ಆದೇಶದಲ್ಲಿ ಮೂರು ತಿಂಗಳುಗಳಿಗಿಂತ ಹೆಚ್ಚಿನ ಅವಧಿಯ ಪ್ರಭಾರ ವ್ಯವಸ್ಥೆಗೆ ಸಂಬಂಧಿಸಿದಂತೆ ನಿಗಧಿಪಡಿಸಿರುವ ಶೇಕಡ 15ರ ದರದ ದಿನಾಂಕದ ಪರಿಗಣನೆ ಕುರಿತಂತೆ:-

1. ದಿ:30/04/2019ರ ತರುವಾಯದಲ್ಲಿ ಪ್ರಭಾರದಲ್ಲಿರಿಸಿದ ಪ್ರಕರಣಗಳಲ್ಲಿ ಮೊದಲ ಮೂರು ತಿಂಗಳವರೆಗಿನ ಅವಧಿಗೆ ಶೇ. 7.5ರ ದರದಲ್ಲಿ, ಮೂರು ತಿಂಗಳ ಅವಧಿಯು ಮುಕ್ತಾಯಗೊಂಡ ತರುವಾಯದ ದಿನಾಂಕದಿಂದ ಶೇಕಡ 15ರ ದರದಲ್ಲಿ ಪ್ರಭಾರ ಭತ್ಯೆಯನ್ನು ನಿಯತಗೊಳಿಸತಕ್ಕದ್ದು.
2. ದಿ:30/04/2019ಕ್ಕೆ ಮೂರು ತಿಂಗಳ ಪ್ರಭಾರದ ಅವಧಿಯು ಮೀರಿದ ಪ್ರಕರಣಗಳಲ್ಲಿ ಶೇಕಡ 15ರ ದರದಲ್ಲಿ ಪ್ರಭಾರ ಭತ್ಯೆಯನ್ನು ನಿಯತಗೊಳಿಸತಕ್ಕದ್ದು.

...2/-

3. ಪ್ರಭಾರ ಭತ್ಯೆಯ ದರಗಳು ದಿ:30/04/2019ರ ಆದೇಶವನ್ನು ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುವುದರಿಂದ, ಈ ಆದೇಶ ಹೊರಡಿಸುವುದಕ್ಕಿಂತ ಹಿಂದಿನ ಅಂದರೆ ದಿ:30/04/2019ಕ್ಕಿಂತ ಹಿಂದಿನ ಪ್ರಭಾರದ ಅವಧಿಗೆ ಸಂಬಂಧಿಸಿದಂತೆ ಎಷ್ಟೇ ಅವಧಿಯು ಒಳಗೊಂಡಿದ್ದರೂ, ಹಿಂದಿನ ದರದಲ್ಲಿಯೇ (ಅಂದರೆ ಶೇ.7.5ರ ದರದಲ್ಲಿಯೇ) ಪ್ರಭಾರ ಭತ್ಯೆಯನ್ನು ನಿಯತಗೊಳಿಸತಕ್ಕದ್ದು.

Suvarna B S

**(ಬಿ.ಎಸ್. ಸುವರ್ಣ)**
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-1)

**ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.**

**ಪ್ರತಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
6. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಪ್ರಧಾನ ಮಹಾಲೇಖಪಾಲರು (ಜಿ & ಎಸ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್.ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
8. ಮಹಾಲೇಖಪಾಲರು (ಇ & ಆರ್ಎಸ್ಎ). ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್.ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
9. ಮಹಾಲೇಖಪಾಲರು (ಎ & ಇ), ಕರ್ನಾಟಕ, ಪೋಸ್ಟ್.ಬಾಕ್ಸ್ ಸಂಖ್ಯೆ-5329/5369, ಪಾರ್ಕ ಹೌಸ್ ರೋಡ್, ಬೆಂಗಳೂರು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
17. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
18. ಪ್ರಾಜೆಕ್ಟ್‌ಆಫೀಸರ್, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145-ಎ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ; ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

[ಕ್ರಮ ಸಂಖ್ಯೆ:6 ರಿಂದ 18 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].

**ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.kar.nic.in ವೀಕ್ಷಿಸಿ.**